**ದಿನಾಂಕಃ 13-02-2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ ಅದರಲ್ಲಿ ಬರೆದಿರುವ ವಿಷಯಗಳು ನಾನೇ ಹೇಳಿ ಬರೆಸಿದ್ದೇನೆ. ಸದರಿ ಸಂಗತಿಗಳು ಸತ್ಯದಿಂದ ಕೂಡಿರುತ್ತವೆ.

**ಮುಖ್ಯ ವಿಚಾರಣೆ 2 ನೇ ಎದುರುದಾರರ ಪರ ಶ್ರೀ ಎಸ್.ಎಮ್.ಎಮ್. ವಕೀಲರಿಂದಃ**

ಅಧಿಕಾರ ಪತ್ರವನ್ನು ನಿ ಆರ್ -1 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಅರ್ಜಿದಾರರ ಪರ ಶ್ರೀ ಪಿ ವಿ ಕೆ ವಕೀಲರಿಂದಃ**

ಅಪಘಾತವಾದ ದಿನದಂದು ಬಸ್ಸು ನಂ.ಕೆಎ-42-ಎಫ್-902 ಬಸ್ಸಿನ್ನು ನಾನೇ ಚಲಾಯಿಸುತ್ತಿದ್ದೆ ಎಂದರೆ ಸರಿ. ಅಪಘಾತ ನನ್ನ ತಪ್ಪಿನಿಂದ ಆಗಿರುವುದಿಲ್ಲ. ಅರ್ಜಿದಾರರು ಬಸ್ಸು ಹತ್ತುವಾಗ ನಾನು ಅದನ್ನು ಗಮನಿಸದೇ ಬಸ್ಸನ್ನು ಮುಂದಕ್ಕೆ ಚಲಾಯಿಸಿ ಅಪಘಾತಕ್ಕೆ ಕಾರಣನಾಗಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ಎಲ್ಲಾ ಪ್ರಯಾಣಿಕರು ಹತ್ತಿದ ನಂತರ ನಿರ್ವಾಹಕ ಸೂಚನೆ ನೀಡಿದ ನಂತರ ಬಸ್ಸನ್ನು ಚಲಾಯಿಸಿರುತ್ತೇನೆ ಎಂದು ನುಡಿಯುತ್ತಾರೆ. ನನ್ನ ತಪ್ಪಿನಿಂದ ಅರ್ಜಿದಾರಳು ಆಯ ತಪ್ಪಿ ಕಾಲಿಗೆ ಗಾಯ ಮಾಡಿಕೊಂಡಿರುತ್ತಾಳೆ ಎಂದರೆ ಸಾಕ್ಷಿಯೂ ಅರ್ಜಿದಾರರ ಗಂಡ ಹಾಗೂ ಚಿಕ್ಕಮ್ಮ ಬಸ್ಸನ್ನು ಹತ್ತಿದ್ದಾರೋ ಇಲ್ಲವೋ ಎಂದು ನೋಡಲು ಹೋಗಿ ಅರ್ಜಿದಾರಳಿಗೆ ಗಾಯವಾಗಿ ಕೆಳಗೆ ಬಿದ್ದಿರುತ್ತಾಳೆ ಎಂದು ನುಡಿಯುತ್ತಾರೆ. ಪೋಲಿಸರು ನನ್ನ ವಿರುದ್ಧ ಎಫ್ ಐ ಆರ್ ಮಾಡಿ ಅಂತಿಮ ವರದಿಯನ್ನು ನನ್ನ ವಿರುದ್ಧ ಸಲ್ಲಿಸಿರುತ್ತಾರೆ ಎಂದರೆ ಸಾಕ್ಷಿ ಅರ್ಜಿದಾರರು ಬಡವರಿದ್ದು ಅವರಿಗೆ ಪರಿಹಾರ ಕೊಡುವ ದೃಷ್ಠಿಯಿಂದ ನನ್ನ ವಿರುದ್ಧ ಕೇಸನ್ನು ದಾಖಲು ಮಾಡಿಕೊಂಡಿರುತ್ತಾರೆ ಅಲ್ಲದೇ ನಾನು ದೂರನ್ನು ಕೊಡಲು ಹೋದರೂ ಸಹ ಅದನ್ನು ಸ್ವೀಕರಿಸಿಲ್ಲ ಎಂದು ನುಡಿಯುತ್ತಾರೆ. ಅಂತಿಮ ವರದಿಯನ್ನು ನಾನು ಪ್ರಶ್ನಿಸಿಲ್ಲ ಎಂದರೆ ಸರಿ. ಪರಿಹಾರ ಕೊಡುವುದನ್ನು ತಪ್ಪಿಸಿಕೊಳ್ಳುವುದಕ್ಕೋಸ್ಕರ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ತಪ್ಪಿನಿಂದಲೇ ಅಪಘಾತ ಸಂಭವಿಸಿದ್ದರಿಂದ ಎದುರುದಾರರು ಪರಿಹಾರ ಕೊಡಲು ಬಾಧ್ಯಸ್ಥರು ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸರಿ ಇದೆ.

ಸಹಿ/-

(ಶ್ರೀಮತಿ ಹುಲ್ಲೂರ ಹೇಮಲತಾ ಬಸಪ್ಪ)
ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು,
ರಾಣೇಬೆನ್ನೂರು.